ಇಲಾಖೆ / ವಿಷಯ : DEPARTMENT / SUBJECT

ಪತ್ರಿಕೆಯ ಹೆಸರು : NAME OF THE NEWS PAPER

ದಿನಾಂಕ :

# ಇಂದು ಉಪ ಸ್ಪೀಕರ್ ಕೃಷ್ಣಾರೆಡ್ಡಿ ರಾಜೀನಾಮೆ?

**ಬೆಂಗಳೂರು:** ವಿಧಾನಸಭೆಯಲ್ಲಿ ಬಹುಮತ ಹೊಂದಿರುವ ಆಡಳಿತಾರೂಢ ಬಿಜೆಪಿ ಮಂಗಳವಾರ ಉಪ ಸಭಾಧ್ಯಕ್ಷ ಜೆ.ಕೆ.ಕೃಷ್ಣಾರೆಡ್ಡಿ (ಜೆಡಿಎಸ್) ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವಸಾಧ್ಯತೆಯಿದ್ದು, ಅದಕ್ಕೂ ಮೊದಲೇ ಕೃಷ್ಣಾರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವ ನಿರೀಕ್ಷೆಯಿದೆ.

ಪಕ್ಷದ ಹಿರಿಯ ನಾಯಕರಿಗೆ ಉಪ ಸಭಾಧ್ಯಕ್ಷರ ಸ್ಥಾನ ನೀಡಬೇಕಾಗಿರುವ ಕಾರಣ ಕೃಷ್ಣಾರೆಡ್ಡಿ ಅವರಿಗೆ ರಾಜೀನಾಮೆ ನೀಡುವಂತೆ ಮುಖ್ಯಮಂತ್ರಿ ಯಡಿಯೂರಪ್ಪ ಅವರು ತಿಳಿಸಿದ್ದರು. ಆದರೆ, ಈವರೆಗೂ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಬಿಜೆಪಿ ಸದಸ್ಯರು ಅವಿಶ್ವಾಸ ನಿರ್ಣಯ ಮಂಡಿಸಲು ಮುಂದಾಗಿದ್ದಾರೆ. ಮಂಗಳವಾರದ ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ವಿಷಯವನ್ನು ಪ್ರಸ್ತಾಪಿಸಲಾಗಿದೆ.